**ಹೆಚ್ಚುವರಿ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ ಕೋರ್ಟ್, ಬಸವನ ಬಾಗೇವಾಡಿ.**

ಸಿಸಿ ನಂಃ 612/2016

ಸಿಡಬ್ಲೂ 02 ಪಿಡಬ್ಲೂ 02

| | | |
|---|---|---|
| ಸಾಕ್ಷಿದಾರರ ಹೆಸರು | ಸಿಂದೂರ ಕಾಳೆ | |
| ತಂದೆ/ಗಂಡನ ಹೆಸರು | ಮುದಕಪ್ಪ | |
| ವಯಸ್ಸು | 35 | ವರ್ಷ |
| ಉದ್ಯೋಗ | ಒಕ್ಕಲುತನ | |
| ವಾಸಸ್ಥಳ | ಗೋನಾಳ | |

**ಸಾಕ್ಷಿಯನ್ನು ಇಂದು ದಿನಾಂಕಃ 09.02.2026 ರಂದು ಕರೆಯಿಸಿ ಪ್ರಮಾಣೀಕರಿಸಲಾಯಿತು.**
**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದ**

1. ಈ ಪ್ರಕರಣದಲ್ಲಿ ನಾನು ಚಾಸಾ-2 ಇರುತ್ತೇನೆ. ಚಾಸಾ- 3 ನನಗೆ ಗೊತ್ತಿಲ್ಲ. ಸಾಕ್ಷಿಯು ಒಂದು ದಾಖಲೆಯ ಮೇಲೆ ಇರುವ ತನ್ನ ಸಹಿಯನ್ನು ಗುರುತಿಸಿದ್ದು, ಸದರಿ ದಾಖಲೆಯ ಸ್ಥಳ ದಾಖಲೆಯು ನಿಪಿ-2 ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-2ಎ ಎಂದು ಗುರುತಿಸಲಾಯಿತು. ನನ್ನ ಸಮಕ್ಷಮದಲ್ಲಿ ಪೋಲಿಸರು ಯಾವುದೇ ಸ್ಥಳ ಮಹಜರ್ ಮಾಡಿರುವುದಿಲ್ಲ. ನನಗೆ ನಿಪಿ-2 ರಲ್ಲಿ ಬರೆದಿರುವ ಅಂಶಗಳು ನನಗೆ ಗೊತ್ತಿರುವುದಿಲ್ಲ.

**(ಈ ಹಂತದಲ್ಲಿ ಎಪಿಪಿ ರವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿಸಿ ಪಾಟಿ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀ ಸವಾಲು ಎ.ಪಿ.ಪಿ ವಕೀಲರಿಂದ**

**1.** ದಿನಾಂಕ 31.03.2016 ರಂದು ಬೆಳಿಗ್ಗೆ 09.00 ರಿಂದ 10.00 ವರಗೆ ಚಾಸಾ-4 ರವರು ತೋರಿಸಿದಂತೆ ಎನ್ ಎಚ್-50 ರಸ್ತೆಯ ಬಾಜು

ಬ.ಬಾಗೇವಾಡಿ ಕ್ರಾಸ್ ದಲ್ಲಿ ಬಸ್ ಸ್ಟ್ಯಾಂಡ್ ಹತ್ತಿರ ನನ್ನ ಮತ್ತು ಚಾಸಾ-3 ರವರ ಸಮಕ್ಷಮದಲ್ಲಿ ಪೋಲಿಸರು ಸ್ಥಳ ಮಹಜರ್ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-2 ರಲ್ಲಿ ಮಾಹಿತಿ ಇದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೆನೆ ಎಂದರೆ ಸರಿಯಲ್ಲ.

**ಪಾಟಿ ಸವಾಲು:- ಆರೋಪಿತ ಪರ ವಕೀಲರಿಂದ ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಅದೆ,

1 ನೇ **ಹೆಚ್ಚುವರಿ ಸಿವಿಲ್**
**ವ ಜೆ ಎಮ್ ಎಫ್ ಸಿ ನ್ಯಾಯಾಧೀಶರು,**
**ಬಸವನ ಬಾಗೇವಾಡಿ.**